**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್. ರವಿ ರವರು ನಿಯಮ 72 ರಡಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ**

**ಪ್ರಶ್ನೆ:**

ರಾಜ್ಯದಲ್ಲಿ ಕಟ್ಟಡ ಮತ್ತು ಮೂಲಭೂತ ಸೌಕರ್ಯ ನಿರ್ಮಾಣ ಕ್ಷೇತ್ರದಲ್ಲಿ ಕಲ್ಲು ಸಾಮಾಗ್ರಿಗಳಿಗೆ ಬೇಡಿಕೆ ಹೆಚ್ಚಾಗಿದ್ದು, ಬೇಡಿಕೆಗೆ ಅನುಗುಣವಾಗಿ ಕಲ್ಲು ಸಾಮಾಗ್ರಿಗಳನ್ನು ಪೂರೈಸಲು ಬೇಕಾಗಿರುವ ಕಚ್ಚಾವಸ್ತುಗಳು ಕಾನೂನುಬದ್ಧವಾಗಿ ಲಭ್ಯವಾಗುತ್ತಿಲ್ಲ. ಇದರಿಂದಾಗಿ ಕಟ್ಟಡ ಮತ್ತು ಮೂಲಭೂತ ಸೌಕರ್ಯ ನಿರ್ಮಾಣ ಕ್ಷೇತ್ರದಲ್ಲಿ ಋಣಾತ್ಮಕ ಅಭಿವೃದ್ಧಿ ಉಂಟಾಗುತ್ತಿದ್ದು, ಕಲ್ಲು ಸಾಮಾಗ್ರಿಗಳನ್ನು ಬೇಡಿಕೆಗೆ ಅನುಗುಣವಾಗಿ ಪೂರೈಕೆ ಮಾಡುವಂತಹ ಗಣಿ ಗುತ್ತಿಗೆ ನಿಯಮಗಳನ್ನು ರೂಪಿಸುವ ಕುರಿತು ಮಾನ್ಯ ಗಣಿ ಮತ್ತು ಭೂವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಗಮನ ಸೆಳೆಯಲು ಅನುಮತಿ ನೀಡುವಂತೆ ಕೋರುತ್ತೇನೆ.

**ಉತ್ತರ:**

ಪ್ರಸ್ತುತ ರಾಜ್ಯದಲ್ಲಿ 2700 ಸಂಖ್ಯೆಯ ಕಟ್ಟಡ ಕಲ್ಲುಗಣಿ ಗುತ್ತಿಗೆಗಳನ್ನು 10026.32 ಎಕರೆ ಪ್ರದೇಶದಲ್ಲಿ ಮಂಜೂರು ಮಾಡಿ ಚಾಲ್ತಿಯಲ್ಲಿರುತ್ತವೆ. ಸದರಿ ಕಲ್ಲುಗಣಿ ಗುತ್ತಿಗೆಗಳ ಸಂಬಂಧ ರಾಜ್ಯ ಪರಿಸರ ಅಘಾತ ಅಂದಾಜೀಕರಣ ಪ್ರಾಧಿಕಾರದಿಂದ ಜಾರಿ ಮಾಡುವ ಪರಿಸರ ಅನುಮತಿ ಪತ್ರದಲ್ಲಿ ವಾರ್ಷಿಕವಾಗಿ ತೆಗೆಯುವ ಉಪಖನಿಜದ ಪ್ರಮಾಣದ ಮಿತಿಯನ್ನು ನಿಗಧಿಪಡಿಸಲಾಗಿದ್ದು, ಸದರಿ ಕಲ್ಲುಗಣಿ ಗುತ್ತಿಗೆಗಳ ವಾರ್ಷಿಕ ಉಪಖನಿಜದ ಪ್ರಮಾಣದ ಮಿತಿಯು 152 ದಶಲಕ್ಷ ಟನ್ ಗಳಾಗಿರುತ್ತದೆ. ಇದಲ್ಲದೆ ಪಕ್ಕದ ರಾಜ್ಯಗಳಾದ ತಮಿಳುನಾಡು, ಆಂಧ್ರಪ್ರದೇಶ, ಮಹಾರಾಷ್ಟ್ರದಿಂದ ರಾಜ್ಯಕ್ಕೆ ಜಲ್ಲಿ ಮತ್ತು ಎಂ-ಸ್ಯಾಂಡ್ ಪೂರೈಕೆ ಯಾಗುತ್ತಿರುತ್ತದೆ.

ರಾಜ್ಯದಲ್ಲಿ ಎಂ-ಸ್ಯಾಂಡ್ ಮತ್ತು ಕಟ್ಟಡಕಲ್ಲಿನ ಉತ್ಪನ್ನಗಳನ್ನು ಬೇಡಿಕೆಗೆ ಅನುಗುಣವಾಗಿ ಪೂರೈಕೆ ಮಾಡಲು ನಿಯಮಗಳನ್ನು ಸರಳೀಕರಣಗೊಳಿಸುವ ಕುರಿತು ಪರಾಮರ್ಶಿಸಿ ಸಚಿವ ಸಂಪುಟಕ್ಕೆ ಶಿಫಾರಸ್ಸುಗಳನ್ನು ಮಾಡಲು ಮಾನ್ಯ ಗಣಿ ಮತ್ತು ಭೂವಿಜ್ಞಾನ, ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ 16.11.2021 ರಂದು ಸಚಿವ ಸಂಪುಟ ಉಪಸಮಿತಿಯನ್ನು ರಚಿಸಿರುತ್ತದೆ.

ಮುಂದುವರೆದು, ದಿನಾಂಕ 25.11.2021, 17.06.2022 ಮತ್ತು 18.07.2022 ರಂದು ಮಾನ್ಯ ಸಚಿವ ಸಂಪುಟ ಉಪಸಮಿತಿಯು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ್ದು, ಸದರಿ ಸಭೆಯಲ್ಲಿ ಎಂ-ಸ್ಯಾಂಡ್ ಮತ್ತು ಕಟ್ಟಡ ಕಲ್ಲಿನ ಉತ್ಪಾದನೆ ಮತ್ತು ಪೂರೈಕೆಯನ್ನು ಹೆಚ್ಚಿಸಲು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ಕ್ಕೆ ಅಗತ್ಯ ತಿದ್ದುಪಡಿ ತಂದು, ನಿಯಮಗಳನ್ನು ಸರಳೀಕರಣಗೊಳಿಸಲು ಶಿಫಾರಸ್ಸನ್ನು ಸಲ್ಲಿಸಿರುತ್ತದೆ.

ಮಾನ್ಯ ಸಚಿವ ಸಂಪುಟ ಉಪಸಮಿತಿಯ ಶಿಫಾರಸ್ಸಿನಂತೆ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ಕ್ಕೆ ತಿದ್ದುಪಡಿ ತರಲು ಕರಡು ನಿಯಮಗಳನ್ನು ಸಿದ್ಧಪಡಿಸಲಾಗಿದ್ದು, ಸದರಿ ತಿದ್ದುಪಡಿ ನಿಯಮಗಳನ್ನು ಅಂತಿಮಗೊಳಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

ಸಿಐ-ಎಂಎಂಎನ್/484/2022

Halappa

**(ಆಚಾರ್ ಹಾಲಪ್ಪಬಸಪ್ಪ)**
ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ
ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ
ಹಿರಿಯ ನಾಗರಿಕರ ಸಬಲೀಕರಣ ಸಚಿವರು.